# ಕರ್ನಾಟಕ ಸರ್ಕಾರದ ನಡವಳಿಗಳು.

**ವಿಷಯ:** ಕರ್ನಾಟಕ ರಾಜ್ಯದ ಮೂಲ ಸೌಲಭ್ಯ ಯೋಜನೆಗಳ ಪಿಪಿಪಿ ನೀತಿ 2018ರ ಮಧ್ಯಂತರ ವಿಮರ್ಶೆ ಕುರಿತು.

**ಓದಲಾಗಿದೆ:** ಅಪರ ಕಾರ್ಯದರ್ಶಿ, ಮೂಲಸೌಲಭ್ಯ ಅಭಿವೃದ್ಧಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ ಇವರ ಪತ್ರ ಸಂಖ್ಯೆ: ಐಡಿಡಿ 30 ಐಟಿಎಸ್ 2021 ದಿನಾಂಕ: 03/09/2021.

**ಪ್ರಸ್ತಾವನೆ:**

ಮೇಲೆ ಓದಲಾದ ಸರ್ಕಾರದ ಅಪರ ಕಾರ್ಯದರ್ಶಿ, ಮೂಲಸೌಲಭ್ಯ ಅಭಿವೃದ್ಧಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ ಇವರ ಪತ್ರದಲ್ಲಿ ಕರ್ನಾಟಕ ರಾಜ್ಯ ಸರ್ಕಾರವು ಮೂಲಸೌಲಭ್ಯ ಯೋಜನೆಗಳನ್ನು ಖಾಸಗಿ ಸಹಭಾಗಿತ್ವದಲ್ಲಿ ಅಭಿವೃದ್ಧಿಪಡಿಸಲು ಮೂಲಸೌಲಭ್ಯ ಅಭಿವೃದ್ಧಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ ಮುಖಾಂತರ ಪಿಪಿಪಿ ಪಾಲಿಸಿ 2018ನ್ನು ಹೊರಡಿಸಿದ್ದು, ಇತರ ಆಡಳಿತ ಇಲಾಖೆಗಳು ಖಾಸಗಿ ಸಹಭಾಗಿತ್ವದೊಂದಿಗೆ ಅಭಿವೃದ್ಧಿಪಡಿಸುವ ಮೂಲಸೌಲಭ್ಯ ಯೋಜನೆಗಳ ನೋಡಲ್ ಏಜೆನ್ಸಿಯಾಗಿದೆ. ಪಿಪಿಪಿ ಪಾಲಿಸಿ–2018ರ ಪ್ಯಾರಾ VI-Duration and Review of Policy – 63ರಲ್ಲಿ ಪ್ರತಿ ಮೂರು ವರ್ಷಗಳಿಗೊಮ್ಮೆ ಪಾಲುದಾರರುಗಳಿಂದ ವಿಮರ್ಶಾತ್ಮಕ ಮೌಲ್ಯಮಾಪನ ಹಾಗೂ ವ್ಯಾಪ್ತಿ ಬದಲಾವಣೆ ಮಾಡುವ ಅವಕಾಶವನ್ನು ಕಲ್ಪಿಸಿದ್ದು, ಅದರಂತೆ ಪಿಪಿಪಿ ಪಾಲಿಸಿ–2018 ಮೂರು ವರ್ಷಗಳ ಅವಧಿಯನ್ನು ಪೂರ್ಣಗೊಳಿಸಿದ್ದು, ಮಧ್ಯಂತರ ವಿಮರ್ಶಾತ್ಮಕ ಮೌಲ್ಯಮಾಪನಕ್ಕೆ ಒಳಪಡಿಸಿ, ಸೂಕ್ತ ಬದಲಾವಣೆಗೆ ಕ್ರಮವಹಿಸಬೇಕಿದೆ. ಆದ್ದರಿಂದ ಇಲಾಖೆಯಿಂದ ಕೈಗೊಂಡಿರುವ ಪಿಪಿಪಿ ಯೋಜನೆಗಳ ಪಾಲುದಾರರು (Authority / Officers, Investor / Concessionaries, Lender / Bankers, Independent Engineers, Beneficiary ಮುಂತಾದವರುಗಳು)ಗಳಿಂದ ಪಿಪಿಪಿ ಪಾಲಿಸಿ-2018ರ ವಿಮರ್ಶೆ ಮತ್ತು ಅಗತ್ಯ ಬದಲಾವಣೆಯ ಕುರಿತು ಇಲಾಖೆಯ ಪ್ರಮುಖ ಅಧಿಕಾರಿಯನ್ನು ನೋಡಲ್ ಅಧಿಕಾರಿಯಾಗಿ ನಿಯೋಜಿಸುವಂತೆ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಕೌಉಜೀಇ 127 ಕೈತಇ 2021 (ಭಾಗ–1)**
**ಬೆಂಗಳೂರು, ದಿನಾಂಕ:27/10/2021.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ರಾಜ್ಯ ಸರ್ಕಾರವು ಮೂಲಸೌಲಭ್ಯ ಯೋಜನೆಗಳನ್ನು ಖಾಸಗಿ ಸಹಭಾಗಿತ್ವದಲ್ಲಿ ಅಭಿವೃದ್ಧಿಪಡಿಸಲು ಮೂಲಸೌಲಭ್ಯ ಅಭಿವೃದ್ಧಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ ಮುಖಾಂತರ ಹೊರಡಿಸಿದ ಪಿಪಿಪಿ ಪಾಲಿಸಿ 2018ರ ಮಧ್ಯಂತರ ವಿಮರ್ಶೆ ಮತ್ತು ಅಗತ್ಯ ಬದಲಾವಣೆಗೆ

--2

ಸಂಬಂಧಿಸಿದಂತೆ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮ ಇವರನ್ನು ನೋಡಲ್ ಅಧಿಕಾರಿಯನ್ನಾಗಿ ನಿಯೋಜಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

27/10/2021

(ರಂಗನಾಥ)
ಸರ್ಕಾರದ ಅಧೀನ ಕಾರ್ಯದರ್ಶಿ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಇಲಾಖೆ

27/10/2021

**ಇವರಿಗೆ:**

1. ಮಹಾಲೇಖಪಾಲರು (ಎ&ಇ), (ಜಿ&ಎಸ್ಎಸ್ಎ), (ಇ&ಆರ್ಎಸ್ಎ), ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮ, ಬನ್ನೇರುಘಟ್ಟ ರಸ್ತೆ, ಬೆಂಗಳೂರು.
4. ಅಪರ ಕಾರ್ಯದರ್ಶಿ, ಮೂಲಸೌಲಭ್ಯ ಅಭಿವೃದ್ಧಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ವಿಕಾಸಸೌಧ, ಬೆಂಗಳೂರು.
5. ಮಾನ್ಯ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ.
6. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ ಗ್ರೇಡ್-2, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ.
7. ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ.
8. ಶಾಖಾಧಿಕಾರಿ-2/3, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ.
9. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.